ದಿನಾಂಕ: 10.06.2024

ಅಸಲು ದಾವೆ : 143/2023 ಪಿ.ಡಬ್ಲ್ಯೂ.1

**ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ : ವಾದಿಗಳ ಪರ ವಕೀಲರಾದ ಶ್ರೀ ಹೆಚ್.ಎಸ್.ಕೆ. ರವರಿಂದಃ**

ನಾನು ನನ್ನ ಮುಖ್ಯ ವಿಚಾರಣ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಅಂಶಗಳನ್ನು ನಾನೇ ನಮ್ಮ ವಕೀಲರಿಗೆ ಹೇಳಿ ವಿವರಿಸಿದ್ದು, ಅದರಲ್ಲಿ ಬರೆದಿರುವ ಅಂಶಗಳು ಸತ್ಯವಾಗಿರುತ್ತವೆ. ಅದರಲ್ಲಿರುವ ಅಂಶಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ. ನಾನು ನನ್ನ ಪರವಾಗಿ ಹಾಜರು ಪಡಿಸಿರುವ ದಾಖಲಾತಿಗಳನ್ನು ನಿಶಾನೆಗಳಾಗಿ ಗುರುತಿಸಬೇಕಾಗಿ ಮನವಿ.

ಪ್ರಥಮ ವರ್ತಮಾನ ವರದಿಯ ದೃಢೀಕೃತ ನಕಲನ್ನು ನಿಪಿ.1 ಎಂದು, ಅಪರಾಧ ವಿವರ ನಮೂನೆಯ ದೃಢೀಕೃತ ನಕಲನ್ನು ನಿಪಿ.2 ಎಂದು, ಶವ ಪಂಚನಾಮೆ ವರದಿಯ ದೃಢೀಕೃತ ನಕಲನ್ನು ನಿಪಿ.3 ಎಂದು, ಶವ ಪರೀಕ್ಷಾ ವರದಿಯ ದೃಢೀಕೃತ ನಕಲನ್ನು ನಿಪಿ.4 ಎಂದು, ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತರವರ ಪತ್ರದ ದೃಢೀಕೃತ ನಕಲನ್ನು ನಿಪಿ.5 ಎಂದು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತರವರ ಪತ್ರದ ದೃಢೀಕೃತ ನಕಲನ್ನು ನಿಪಿ.6 ಎಂದು, ವಿದ್ಯುತ್ ಪರಿವೀಕ್ಷಣ ಇಲಾಖೆಯವರ ಪತ್ರದ ದೃಢೀಕೃತ ನಕಲನ್ನು ನಿಪಿ.7 ಎಂದು, ರೇಷನ್ ಕಾರ್ಡ್ ನೋಟರಿ ಪ್ರತಿಯನ್ನು ನಿಪಿ.8 ಎಂದು, ಆಧಾರ್ ಕಾರ್ಡ್ ನ ನೋಟರಿ ಪ್ರತಿಯನ್ನು ನಿಪಿ.9 ಎಂದು ಗುರುತಿಸಲಾಯಿತು.

ವಿನಂತಿಯ ಮೇರೆಗೆ **ಮುಂದುವರೆದ ಮುಖ್ಯ ವಿಚಾರಣೆಗೆ ಮುಂದೂಡಲಾಯಿತು.**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ.ಹೇ.ಕೇ ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು

ಮದ್ದೂರು.